4 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಮೈಸೂರು

ಎಸ್. ಸಿ. ಸಂಃ 228/2023

ಫಿರ್ಯಾದಿ : ಕರ್ನಾಟಕ ರಾಜ್ಯ ಸರ್ಕಾರ
ಆರಕ್ಷಕ ಉಪ-ನಿರೀಕ್ಷಕರು,
ಕೆ.ಆರ್.ನಗರ ಪೊಲೀಸ್ ಠಾಣೆ,

**ವಿರುದ್ಧ**

ಆರೋಪಿ : ಶ್ರೀ ಪರಮೇಶ

## ದೋಷಾರೋಪಣೆ

ನಾನು ಶ್ರೀ ಮಲ್ಲನಗೌಡ, 4 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮೈಸೂರು, ಈ ಕೆಳಕಂಡ ಆರೋಪಿಯಾದ :-

ಶ್ರೀ ಪರಮೇಶ ಬಿನ್ ಲೇಟ್ ಪುಟ್ಟೇಗೌಡ,
ಸುಮಾರು 45 ವರ್ಷ,
ವಾಸಃ ಬಸವಪಟ್ಟಣ ಗ್ರಾಮ, ಕಸಬಾ ಹೋಬಳಿ,
ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ.

ನಿಮ್ಮ ಮೇಲೆ ಹೊರಿಸುವ ದೋಷಾರೋಪಣೆ ಏನೆಂದರೆಃ

ಕೆ.ಆರ್.ನಗರ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಕೆ.ಆರ್.ನಗರ ತಾಲ್ಲೂಕು, ಕಸಬಾ ಹೋಬಳಿ, ಡೋರನಹಳ್ಳಿ ಪೋಸ್ಟ್, ಬಸವಪಟ್ಟಣ ಗ್ರಾಮದ ಎಲ್ಲೆಗೆ ಸೇರಿದ ಮರಿಯಮ್ಮ ಕೋಂ ಮಲ್ಲೇಗೌಡ ಎಂಬುವವರಿಗೆ ಸೇರಿದ ಸರ್ವೆ ನಂ.87/9 ರ ಜಮೀನಿನ ಬಳಿ ದಿನಾಂಕ 15.05.2019 ರಂದು ಸಂಜೆ 5.00 ಗಂಟೆ ಸಮಯದಲ್ಲಿ 1 ನೇ ಆರೋಪಿಯಾದ ನೀವು

ಸಾಕ್ಷಿ–1 ರವರನ್ನು ನೋಡಿ ನೀನೇನು ಇಲ್ಲಿ ಮಾಡುತ್ತಿದ್ದೀಯಾ ಬೋಳಿ ಮಗನೇ, ಸೂಳೇ ಮಗನೇ ಎಂದು ಅವಾಚ್ಯ ಶಬ್ಧಗಳಿಂದ ಬೈದು ನಿಂದಿಸಿದ್ದು, ಆ ಕಾರಣದಿಂದ ಆರೋಪಿತರಾದ ನೀವು ಭಾ.ದಂ.ಸಂ. 504 ರ ಅಡಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಸದರಿ ಅಪರಾಧವು ಈ ನ್ಯಾಯಾಲಯದ ಸಂಜ್ಞೆಗೆ ಒಳಪಟ್ಟಿರುತ್ತದೆ.

ಎರಡನೇಯದಾಗಿ ಮೇಲೆ ಹೇಳಿದ ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಕಬ್ಬಿಣದ ಸರಳಿನಿಂದ ಸಾಕ್ಷಿ–1 ರವರ ಹಣೆಯ ಎಡಬದಿಗೆ ಹೊಡೆದು, ನಂತರ ಅಲ್ಲೇ ಬಿದ್ದಿದ್ದ ಎರಡು ದೊಣ್ಣೆಗಳನ್ನು ತೆಗೆದುಕೊಂಡು ಸಾಕ್ಷಿ–1 ರವರ ಕಡೆಗೆ ಬೀಸಿದ್ದಲ್ಲದೆ, ಕಲ್ಲೋಂದನ್ನು ತೆಗೆದುಕೊಂಡು ಸಾಕ್ಷಿ–1 ರವರ ಕಡೆಗೆ ಬೀಸಿ ಸಾಕ್ಷಿ–1 ರವರ ತಲೆಯ ಎಡಭಾಗಕ್ಕೆ ಮತ್ತು ಎಡ ತೋಳಿಗೆ ಗಾಯವನ್ನುಂಟು ಮಾಡಿದ್ದು, ಆ ಕಾರಣದಿಂದ ಆರೋಪಿತಯಾದ ನೀವು ಭಾ.ದಂ.ಸಂ. 324 ರ ಅಡಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಸದರಿ ಅಪರಾಧವು ಈ ನ್ಯಾಯಾಲಯದ ಸಂಜ್ಞೆಗೆ ಒಳಪಟ್ಟಿರುತ್ತದೆ.

ಮೂರನೇಯದಾಗಿ ಮೇಲೆ ಹೇಳಿದ ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಸಾಕ್ಷಿ–1 ರವರಿಗೆ ಮಗನೇ ಇಂದಲ್ಲಾ ನಾಳೆ ನಿನ್ನನ್ನ ಕೊಲೆ ಮಾಡದೆ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿದ್ದು, ಆ ಕಾರಣದಿಂದ ಆರೋಪಿತರಾದ ನೀವು ಭಾ.ದಂ.ಸಂ. 506 ಅಡಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಸದರಿ ಅಪರಾಧವು ಈ ನ್ಯಾಯಾಲಯದ ಸಂಜ್ಞೆಗೆ ಒಳಪಟ್ಟಿರುತ್ತದೆ.

ಈ ಮೇಲ್ಕಂಡ ಆರೋಪದಡಿ ಆರೋಪಿಯಾದ ನೀವು ನನ್ನಿಂದ ಈ ದಿನ ದಿನಾಂಕ 24.07.2024 ರಂದು ಅಧಿವಿಚಾರಣೆಗೆ ಒಳಪಡುತ್ತೀರೆಂದು ಈ ಮೂಲಕ ನಿರ್ದೇಶಿಸುತ್ತೇನೆ.

(ಮಲ್ಲನಗೌಡ )
4 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು

4 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಮೈಸೂರು

ಎಸ್. ಸಿ. ಸಂಃ 228/2023

ಫಿರ್ಯಾದಿ : ಕರ್ನಾಟಕ ರಾಜ್ಯ ಸರ್ಕಾರ
ಆರಕ್ಷಕ ಉಪ-ನಿರೀಕ್ಷಕರು,
ಕೆ.ಆರ್.ನಗರ ಪೊಲೀಸ್ ಠಾಣೆ,

**ವಿರುದ್ಧ**

ಆರೋಪಿ : ಶ್ರೀ ಪರಮೇಶ

**ಆರೋಪಿಯ ಹೇಳಿಕೆ**

ಪ್ರಶ್ನೆ – 1) ಈಗ ನಿಮಗೆ ಓದಿ ತಿಳಿಸಿ ಹೇಳಲಾದ ದೋಷಾರೋಪಣೆಯು ಅರ್ಥವಾಯಿತೇ ?

ಉತ್ತರ –

ಪ್ರಶ್ನೆ –2) ಸದರಿ ದೋಷಾರೋಪಣೆಗೆ ಸಂಬಂಧಿಸಿದಂತೆ ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರೋ? ಅಥವಾ ವಿಚಾರಣೆ ನಡೆಯಬೇಕೆಂದು ಬಯಸುತ್ತೀರೋ ?

ಉತ್ತರ –

(ಮೇಲಿನ ದೋಷಾರೋಪಣೆಯನ್ನು ಆರೋಪಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಓದಿ ತಿಳಿಸಿ ಹೇಳಿದ ನಂತರ, ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ನನ್ನ ಸ್ವಹಸ್ತಾಕ್ಷರದಲ್ಲಿ ಬರೆದುಕೊಳ್ಳಲಾಯಿತು ಎಂದು ನಾನು ಈ ದಿನ ಅಂದರೆ, ದಿನಾಂಕ **24.07.2024** ರಂದು ದೃಢೀಕರಿಸುತ್ತೇನೆ )

( ಮಲ್ಲನಗೌಡ )
4 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ಮೈಸೂರು.